ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಖಾಲಿ ಇರುವ ಪಿ.ಡಿ.ಓ.ಗಳ ಬಗ್ಗೆ

ಶ್ರೀ ಬಿ. ಜಿ. ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

496 (512) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಓ)ಗಳ ಹುದ್ದೆಗಳೆಷ್ಟು; (ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಜಾಗದಲ್ಲಿ ಪ್ರಭಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಪಂಚಾಯಿತಿ ಸಿಬ್ಬಂದಿಗಳಾದ ದ್ವಿತೀಯ ದರ್ಜೆ ಲೆಕ್ಕ ಸಹಾಯಕ /ಕಾರ್ಯದರ್ಶಿ ಗ್ರೇಡ್-2 ಇವರುಗಳಿಗೆ ಪ್ರಭಾರ ನೀಡುವ ಬಗ್ಗೆ 2014ರಲ್ಲಿ ಆದೇಶ ಹೊರಡಿಸಲಾದ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)